# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1106 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |
| ಉತ್ತರಿಸಬೇಕಾದ ದಿನಾಂಕ | 15–03–2021 |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಒಟ್ಟು 23 ವಿಶ್ವವಿದ್ಯಾನಿಲಯಗಳಿವೆ. ವಿಶ್ವವಿದ್ಯಾನಿಲಯಗಳ ವಿವರವನ್ನು ಹಾಗೂ ಪ್ರತಿ ವಿಶ್ವವಿದ್ಯಾನಿಲಯಗಳಿಗೆ ಮಂಜೂರಾದ/ ಭರ್ತಿಯಾದ/ ಖಾಲಿ ಇರುವ ಹುದ್ದೆಗಳ ವಿವರಗಳನ್ನು <u>ಅನುಬಂಧ-ಅ</u> ದಲ್ಲಿ ಲಗತ್ತಿಸಿದೆ. |
| (ಆ) | ವಿಶ್ವವಿದ್ಯಾನಿಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; | |
| (ಇ) | ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಮತ್ತು ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಆರ್ಥಿಕ ಇಲಾಖೆಯ ಸುತ್ತೋಲೆ ಸಂ. ಆಇ 03 ಬಿಇಎಂ 2020, ದಿನಾಂಕ: 06–07–2020ರಲ್ಲಿ "ರಾಜ್ಯದಲ್ಲಿ ಕೋವಿಡ್–19ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ, ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ 2020–21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿರುತ್ತದೆ.<br>ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂಬಂಧ ವಿಧಿಸಿರುವ ನಿರ್ಬಂಧಗಳನ್ನು ಆರ್ಥಿಕ ಇಲಾಖೆಯು ತೆರವುಗೊಳಿಸಿದ ನಂತರ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುವುದು. |
| (ಈ) | ವಿಶ್ವವಿದ್ಯಾನಿಲಯಗಳಿಗೆ ನೀಡುತ್ತಿರುವ ಅನುದಾನಗಳು ಎಷ್ಟು? (ವಿವರ ನೀಡುವುದು) | ಅನುದಾನದ ವಿವರವನ್ನು <u>ಅನುಬಂಧ-ಅ</u> ದಲ್ಲಿ ಲಗತ್ತಿಸಿದೆ. |

ಸಂಖ್ಯೆ: ಇಡಿ 95 ಯುಎನ್‌ಇ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ).

# ಅನುಬಂಧ-ಅ

| ಕ್ರ ಸಂ. | ವಿಶ್ವವಿದ್ಯಾಲಯದ ಹೆಸರು | ಮಂಜೂರಾದ ಬೋಧಕ ಹುದ್ದೆ | ಭರ್ತಿಯಾದ ಬೋಧಕ ಹುದ್ದೆ | ಖಾಲಿ ಇರುವ ಬೋಧಕ ಹುದ್ದೆ | ಮಂಜೂರಾದ ಬೋಧಕೇತರ ಹುದ್ದೆ | ಭರ್ತಿಯಾದ ಬೋಧಕೇತರ ಹುದ್ದೆ | ಖಾಲಿ ಇರುವ ಬೋಧಕೇತರ ಹುದ್ದೆ | 2020-21ನೇ ಸಾಲಿನಲ್ಲಿ ಒದಗಿಸಲಾದ ಅನುದಾನದ ವಿವರ (ರೂ. ಲಕ್ಷಗಳಲ್ಲಿ) |
|---|---|---|---|---|---|---|---|---|
| 1 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ | 151 | 95 | 56 | 137 | 40 | 97 | 2058.36 |
| 2 | ಕನ್ನಡ ವಿಶ್ವವಿದ್ಯಾಲಯ | 73 | 56 | 17 | 234 | 163 | 71 | 2701.90 |
| 3 | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ | 120 | 87 | 33 | 272 | 132 | 140 | 2627.61 |
| 4 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 137 | 76 | 61 | 574 | 208 | 366 | – |
| 5 | ಗುಲ್ಬರ್ಗ ವಿಶ್ವವಿದ್ಯಾಲಯ | 248 | 59 | 189 | 707 | 221 | 486 | 5305.95 |
| 6 | ಬೆಂಗಳೂರು ನಗರ ವಿಶ್ವವಿದ್ಯಾಲಯ | 161 | 17 | 144 | 124 | 14 | 110 | 613.46 |
| 7 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 24 | 00 | 24 | 32 | 01 | 31 | 111.25 |
| 8 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | 103 | 67 | 36 | 173 | 16 | 157 | 1328.05 |
| 9 | ತುಮಕೂರು ವಿಶ್ವವಿದ್ಯಾಲಯ | 217 | 132 | 85 | 214 | 46 | 168 | 2427.94 |
| 10 | ದಾವಣಗೆರೆ ವಿಶ್ವವಿದ್ಯಾಲಯ | 164 | 139 | 25 | 178 | 31 | 147 | 2372.57 |
| 11 | ಕುವೆಂಪು ವಿಶ್ವವಿದ್ಯಾಲಯ | 238 | 188 | 50 | 590 | 315 | 275 | 6659.45 |
| 12 | ಮೈಸೂರು ವಿಶ್ವವಿದ್ಯಾಲಯ | 664 | 296 | 368 | 1349 | 567 | 782 | 14733.93 |
| 13 | ಬೆಂಗಳೂರು ವಿಶ್ವವಿದ್ಯಾಲಯ | 365 | 162 | 203 | 1383 | 555 | 828 | 11973.00 |
| 14 | ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 15 | 00 | 15 | 19 | 01 | 18 | 66.16 |
| 15 | ಕರ್ನಾಟಕ ವಿಶ್ವವಿದ್ಯಾಲಯ | 578 | 255 | 323 | 1368 | 419 | 949 | 14350.00 |
| 16 | ಸಂಸ್ಕೃತ ವಿಶ್ವವಿದ್ಯಾಲಯ | 71 | 39 | 32 | 62 | 37 | 25 | 706.39 |
| 17 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 228 | 142 | 86 | 425 | 310 | 190 | – |
| 18 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ | 67 | 08 | 59 | 97 | 11 | 86 | 168.28 |
| 19 | ಮಂಗಳೂರು ವಿಶ್ವವಿದ್ಯಾಲಯ | 273 | 175 | 98 | 547 | 240 | 307 | 6341.23 |
| 20 | ರಾಯಚೂರು ವಿಶ್ವವಿದ್ಯಾನಿಲಯ | ಈ ವಿಶ್ವವಿದ್ಯಾನಿಲಯಗಳು 2020ನೇ ಸಾಲಿನಿಂದ ಪ್ರಾರಂಭಗೊಂಡಿದ್ದು, ಪ್ರಸ್ತುತ ಯಾವುದೇ ಬೋಧಕ/ಬೋಧಕೇತರ ಹುದ್ದೆಗಳು ಸೃಜನೆಯಾಗಿರುವುದಿಲ್ಲ. | | | | | | |
| 21 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯ | | | | | | | |
| 22 | ನೃಪತುಂಗ ವಿಶ್ವವಿದ್ಯಾನಿಲಯ | | | | | | | |
| 23 | ಮಂಡ್ಯ ವಿಶ್ವವಿದ್ಯಾನಿಲಯ | | | | | | | |
| | ಒಟ್ಟು ಹುದ್ದೆಗಳ ಸಂಖ್ಯೆ | 3897 | 1993 | 1904 | 8485 | 3327 | 5233 | |